RNI No. **KARBIL/2001/47147**

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೮ **Volume 148**	ಬೆಂಗಳೂರು, ಗುರುವಾರ, ನವೆಂಬರ್ ೧೪, ೨೦೧೩ (ಕಾರ್ತೀಕ ೨೩, ಶಕ ವರ್ಷ ೧೯೩೫) **Bangalore, Thursday, November 14, 2013 (Karthika 23, Shaka Varsha 1935)**	ಸಂಚಿಕೆ ೪೫ **Issue 45**

ಭಾಗ ೫

ಸರ್ಕಾರದ ಮತ್ತು ಖಾಸಗಿ ಜಾಹೀರಾತುಗಳು, ಲೋಕಸೇವಾ ಆಯೋಗದ ಜಾಹೀರಾತುಗಳು, ನೇಮಕಾತಿ ಸಮಿತಿಗಳ ಜಾಹೀರಾತುಗಳು

FORM-IV

(See Rule 12)

NOTICE

It is hereby notified that the undersigned has changed his/her name from Smt. **LAKSHMIDEVAMMA. N. to LATHA. N.**

PD-C/N-130 — **LAKSHMIDEVAMMA N.**

SC-10

FORM- IV

(See Rule 12)

NOTICE

It is hereby notified that the undersigned has changed his/her name from **Sri. GANGAPPA. SHIVAPPA. LAMANI** to **GANGARAM. SHIVAPPA. RATHOD**

PD- C/N-131 — **GANGAPPA. SHIVAPPA. LAMANI**

SC-10

FORM- IV

(See Rule 12)

NOTICE

It is hereby notified that the undersigned has changed his/her name from **Sri. SHANKREPPA SHIVAPPA HARIJAN** to **SHANKAR SHIVAPPA HADIMANI.**

PD- C/N-133 — **SHANKREPPA SHIVAPPA HARIJAN**

SC-10

FORM-1

(See Rule 9)

Department of Public Instructions

Office of the DDPI, Sirsi Education Dist. UK

Dated : 24-04-2013

NOTIFICATION

Sri/Smt. **MUTTAPPA SIDDAPPA HARIJAN** Working as Asst.-Teacher in the Department of Public Instructions of/office of L.P.S. Golehalli Tq. Haliyala, Sirsi Education Dist. Is permitted to change of name **MUTTAPPA SIDDAPPA TAKKOD**.

DEPUTY DIRECTOR (Admn.)
of the Public Instructions Sirsi
Education Dist. U.K.

PD-V-C/N-136
SC-10

FORM- IV

(See Rule 12)

NOTICE

It is hereby notified that the undersigned has changed his/her name from Smt**. PADMAVATI BILYANI WADER** to **PRABHAVATI RAVASAHEB CHOUGULE.**

PADMAVATI BILYANI WADER

PD- C/N-137
SC-10

FORM-I

(See Rule 9)

Department of Education

Office of the DDPI, BAGALKOT

NOTIFICATION

Sri **PUNDLIKAPPA BASAPPA KURI** Working as Assistant Teacher in the Education Department of Office of Government High School, Neeralakeri Tq : Bagalkot District. Bagalkot. is permitted to change his/her name to **PUNDLIKAPPA BASAPPA PATIL**.

DEPUTY DIRECTOR (Admn.)
of Public Instructions,
Bagalkot.

PD-C/N-138
SC-10

FORM- IV

(See Rule 12)

NOTICE

It is hereby notified that the undersigned has changed his/her name from Sri**. JAYA S/O BHARATRAO** to **JAYARAJ S/O BHARATRAO.**

JAYA S/O BHARATRAO

PD- C/N-139
SC-10

FORM- IV

(See Rule 12)

NOTICE

It is hereby notified that the undersigned has changed his/her name from **Sri. LAXMAPPA LACHCHAVVA MADAR** to **LAXMAN LACHCHAVVA ANKALAGI.**

PD- C/N-140 **LAXMAPPA LACHCHAVVA MADAR**
SC-10

FORM- IV

(See Rule 12)

NOTICE

It is hereby notified that the undersigned has changed his/her name from **Sri. YAMANAPPA RAMAPPA MADAR** to **YAMANAPPA RAMAPPA BARAMANNAVAR.**

PD- C/N-141 **YAMANAPPA RAMAPPA MADAR**
SC-10

FORM-I

(See Rule 9)

Department of Agriculture

Directorate of Agriculture, Sheshadri Road, Bangalore-1.

NOTIFICATION

No. Sibbandi-2/aep-1/con/85/07-08, dated : 10-05-2013.

Sri **BHIMU BHAVASING LAMANI** Working as Agriculture Assistant in the Agriculture Department of Office of the Assistant Director of Agriculture, Bijapur is permitted to change his name to **BHIMU BHAVASING NAYAK.**

PD-C/N-142 **DIRECTOR OF AGRICULTURE**
SC-10 Department of Agriculture, Bangalore-1.

FORM- IV

(See Rule 12)

NOTICE

It is hereby notified that the undersigned has changed his/her name from Sri. **RAGINDRAPPA M/O DURUGAWWA** to **RAGHAVENDRA S/O NAGAPPA.**

PD- C/N-134 **RAGINDRAPPA M/O DURUGAWWA**
SC-10

ನಮೂನೆ –1

(9ನೇ ನಿಯಮ ನೋಡಿ)

ಶಿಕ್ಷಣ ಇಲಾಖೆ

ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ಬೀಳಗಿ, ಜಿಲ್ಲಾ : ಬಾಗಲಕೋಟ

ಅಧಿಸೂಚನೆ

ಸರಕಾರಿ ಕನ್ನಡ ಕಿರಿಯ ಪ್ರಾಥಮಿಕ ಶಾಲೆ ಕೊಂತಿಕಲ್ಲ ತಾಲ್ಲೂಕು ಬೀಳಗಿ ಜಿಲ್ಲಾ ಬಾಗಲಕೋಟ ಇಲ್ಲಿ ಸಹ ಶಿಕ್ಷಕನಾಗಿ ಕಾರ್ಯ ನಿರ್ವಹಿಸುತ್ತಿರುವ "**ಫಕೀರಪ್ಪ ರಂಗಪ್ಪ ತೆಗ್ಗೆಪ್ಪನವರ**" ಇವರಿಗೆ ತಮ್ಮ ಹೆಸರನ್ನು "**ಫಕೀರಪ್ಪ ರಂಗಪ್ಪ ಬಿರಾದಾರ**" ಎಂದು ಬದಲಾಯಿಸಿಕೊಳ್ಳಲು ಅನುಮತಿ ನೀಡಲಾಗಿದೆ.

P.D. C/n 143 ಕ್ಷೇತ್ರ ಶಿಕ್ಷಣಾಧಿಕಾರಿಗಳು
SC-10 ಬೀಳಗಿ, ಜಿಲ್ಲಾ ಬಾಗಲಕೋಟ

FORM- IV

(See Rule 12)

NOTICE

It is hereby notified that the undersigned has changed his/her name from Sri. **HANUMANTA** to **HARSHA M RATHOD.**

PD- C/N-144
SC-10

HANUMANTA

FORM-I

(See Rule 9)

Department of State Accounts

Office of the Controller State Accounts Department, Bangalore Date: 21-10-2013

NOTIFICATION

Smt. **RENUKA RAGHUNATHI** Working as Junior Accounts Assistant in the State Accounts Department of Office of the Executive Engineer, Malaprabha Left Bank Canal Division No.4, Navalgund is permitted to change her name to **Smt. Renuka W/o Mohan Nayak.**

PD-C/N-145
SC-10

R.S. PHONDE
Controller
State Accounts Department, Bangalore

IN THE COURT OF CITY CIVIL JUDGE AT MAYO HALL, BANGLAORE

P & SC No. 25034/2013

BETWEEN

PETITIONERS:

1. Mr. K. NARAYANABAN, aged about 70 years, S/o Late K.Y. Kulathu Iyer & H/o Late Sarada Narayana, Residing at # 15/57, Jeeevan Kendra Layout, 2nd Main, Cambridge Road, Halasuru, Bangalore-560 008.
2. Mrs. SRILAKSHMI KANNAN, aged about 35 years, D/o Lage Sarada Narayanan & W/o Mr. Kannan, Residing at #15/57, Jeevan Kendra Layout, 2nd Main Cambridge Road, Halasuru, Bangalore-560 008.

AND

RESPONDENT:

MRS. MAHALAKSHMI KRISHNAN, aged about 71 years, W/o Mr. Krishnan & D/o Late Visalakshi Natesan, Residing at # 45, "ANUSHA" 26th Cross Street, Indiranagar, Adyar, Chennai – 600 020.

PUBLIC NOTICE

Notice is hereby given that a Petition has been made to this Court under Sections 278 of the Indian Succession Act, 1925 for grant of Letter of Administration in respect of the Schedule Property of Late MRS. SARADA NARAYANAN, who died intestate on 24-01-2013 at Hassan.

Be it known that no Caveat has been entered and the said petition is posted for hearing on 28-10-2013 at 11 a.m. in the Court of the IV Additional City Civil & Sessions Judge, Mayo Hall, Bangalore (CCH-21). Any person(s) claiming to have any interest may appear before the Court on the above mentioned day whether in person or through a pleader before grant of Letter of Administration in favour of the Petitioners.

SCHEDULE

50% of Undivided share, right, title and interest equivalent to 880 Square Feet in Residential Property bearing No. 15/57 situated at Jeevan Kendra Layout, 2nd Main, Cambridge Road, Halasuru, Bangalore-560 008 (Ward No. 75 – PID No. 75-44-15/57) and the entire First Floor portion constructed thereon with a built-up area of 1200 Square Feet and bounded on :

East by	:	Road
West by	:	Private Property
North by	:	Mr. Papaiah's Property
South by	:	Drain Government & Private Property

Given under my hand and seal of the Court on this the 5th day of October 2013.

By Order of the Court
Assistant Registrar
City Civil Court
Mayo Hall Unit, Bangalore.

PD-66
SC-5

ಕೋಲಾರ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿ.

ಅಧಿಸೂಚನೆ ಸಂಖ್ಯೆ : ಎಡಿಎಂ 02/2013 ದಿನಾಂಕ : 07-10-2013.

ವಿಷಯ : ಶೀಘ್ರಲಿಪಿಗಾರರು, ಬೆರಳಚ್ಚುಗಾರರು, ಬೆರಳಚ್ಚು - ನಕಲುಗಾರರು, ಸೇವಕರು ಮತ್ತು ಸ್ವೀಪರ್-ಕಂ-ವಾಚ್‌ಮನ್ ಹುದ್ದೆಗಳ ನೇಮಕಾತಿ ಬಗ್ಗೆ.

ಉಲ್ಲೇಖ: 1. ಸರ್ಕಾರಿ ಅಧಿಸೂಚನೆ ಸಂಖ್ಯೆ: ಲಾ 113/ಎಲ್‌ಸಿಇ-2012, ದಿನಾಂಕ: 11-12-2012, ಲಾ 112/ಎಲ್‌ಸಿಇ-2012, ದಿನಾಂಕ: 28-12-2012,

2. ಕರ್ನಾಟಕ ಉಚ್ಚ ನ್ಯಾಯಾಲಯ ಬೆಂಗಳೂರು ರವರ ಪತ್ರ ಸಂಖ್ಯೆ ಎಲ್‌ಸಿಎ II 08/2011 ದಿನಾಂಕ 17.01.2013, ಎಲ್‌ಸಿಎ II 128/2012 ದಿನಾಂಕ 21.01.2013, ಎಲ್‌ಸಿಎ II 128/2012 ದಿನಾಂಕ 24.09.2013.

ಕೋಲಾರ ಜಿಲ್ಲೆ ನ್ಯಾಯಾಂಗ ಇಲಾಖೆಯ ಕೌಟುಂಬಿಕ ನ್ಯಾಯಾಲಯ, ಬಂಗಾರಪೇಟೆಯ ಅಪರ ವ್ಯವಹಾರ ನ್ಯಾಯಾಲಯ ಹಾಗೂ ಇತರೆ ನ್ಯಾಯಾಲಯಗಳಲ್ಲಿ ಖಾಲಿ ಇರುವ ಎರಡು ಶೀಘ್ರಲಿಪಿಗಾರರ, ಎರಡು ಬೆರಳಚ್ಚುಗಾರರ, ಒಂದು ಬೆರಳಚ್ಚು - ನಕಲುಗಾರರ, ಒಂದು ಸ್ವೀಪರ್-ಕಂ-ವಾಚ್‌ಮನ್ (ಸೇವಕ) ಸೇರಿ ಎಂಟು ಸೇವಕರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಈ ಅಧಿಸೂಚನೆಯ ಜೊತೆಗೆ ಲಗತ್ತಿಸಿರುವ ಅರ್ಜಿ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕ 25-11-2013, ಅಪರಾಹ್ನ 5-00 ಗಂಟೆಯವರೆಗೆ.

1. ಶೀಘ್ರಲಿಪಿಗಾರರು : ಖಾಲಿ ಇರುವ ಹುದ್ದೆಗಳು - 02.

ವೇತನ ಶ್ರೇಣಿ: 14550-350-15600-400-17200-450-19000-500-21000-600-24600-700-26700.

ಹುದ್ದೆಗಳ ವರ್ಗೀಕರಣ :

ಮೀಸಲಾತಿ	ಗ್ರಾಮೀಣ	ಒಟ್ಟು ಹುದ್ದೆ
ಸಾಮಾನ್ಯ	01	01
ಪರಿಶಿಷ್ಟ ಜಾತಿ	01	01
ಒಟ್ಟು	02	02

ಶೀಘ್ರಲಿಪಿಗಾರರಿಗೆ ವಿದ್ಯಾರ್ಹತೆ : ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆ ಮತ್ತು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯವರು ನಡೆಸುವ ಕನ್ನಡ ಮತ್ತು ಆಂಗ್ಲ ಎರಡೂ ಭಾಷೆಯಲ್ಲೂ ಹಿರಿಯ ಶ್ರೇಣಿ ಬೆರಳಚ್ಚು ಮತ್ತು ಶೀಘ್ರಲಿಪಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

ಆಯ್ಕೆಯ ವಿಧಾನ : ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು ನಿಮಿಷ ಒಂದಕ್ಕೆ 120 ಪದಗಳ ದರದಲ್ಲಿ 5 ನಿಮಿಷಗಳ ಉಕ್ತಲೇಖನವನ್ನು ತೆಗೆದುಕೊಂಡು, ಉಕ್ತಲೇಖನವನ್ನು 45 ನಿಮಿಷಗಳಲ್ಲಿ ಅನುಲಿಪಿ ಮಾಡುವ ಅರ್ಹತಾ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

ಟಿಪ್ಪಣಿ: ಅರ್ಹತಾ ಪರೀಕ್ಷೆಯು ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು, ಅದರಲ್ಲಿ ತೇರ್ಗಡೆಯಾಗಲು ಕನಿಷ್ಟ 50 ಅಂಕಗಳನ್ನು ಪಡೆಯಬೇಕು ಮತ್ತು ಸಂದರ್ಶನವು 5 ಅಂಕಗಳನ್ನೊಳಗೊಂಡಿರುತ್ತದೆ.

ಕರ್ನಾಟಕ ಸರ್ಕಾರ ಆದೇಶ ಸಂಖ್ಯೆ ಡಿಪಿಎಆರ್. 59 ಎಸ್.ಸಿ.ಆರ್. 2012 ದಿನಾಂಕ 07.07.2012 ರ ಪ್ರಕಾರ ದಿನಾಂಕ 22.03.2012 ರಿಂದ ಜಾರಿಗೆ ಬಂದಿರುವಂತೆ ಗಣಕಯಂತ್ರ (ಕಂಪ್ಯೂಟರ್) ಜ್ಞಾನ ಕಡ್ಡಾಯ.

2. ಬೆರಳಚ್ಚುಗಾರರು : ಖಾಲಿ ಇರುವ ಹುದ್ದೆಗಳು - 02.

ವೇತನ ಶ್ರೇಣಿ: 11600-200-12000-250-13000-300-14200-350-15600-400-17200-450-19000-500-21000.

ಹುದ್ದೆಗಳ ವರ್ಗೀಕರಣ

ಮೀಸಲಾತಿ	ಇತರೆ	ಮಹಿಳೆ	ಒಟ್ಟು
ಪ್ರವರ್ಗ-2 (ಎ)	01	-	01
ಸಾಮಾನ್ಯ	-	01	01
ಒಟ್ಟು	**01**	**01**	**02**

ವಿದ್ಯಾರ್ಹತೆ : ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆ ಮತ್ತು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯವರು ನಡೆಸುವ ಕನ್ನಡ ಮತ್ತು ಇಂಗ್ಲಿಷ್ ಎರಡೂ ಭಾಷೆಯಲ್ಲೂ ಹಿರಿಯ ಶ್ರೇಣಿ ಬೆರಳಚ್ಚು ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

ಆಯ್ಕೆಯ ವಿಧಾನ : ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು 15 ನಿಮಿಷಗಳ ಉಕ್ತಲೇಖನದಲ್ಲಿ ಕೊಡುವ ವಿಷಯವನ್ನು ಬೆರಳಚ್ಚು ಮಾಡುವ ಅರ್ಹತಾ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

ಟಿಪ್ಪಣಿ: ಅರ್ಹತಾ ಪರೀಕ್ಷೆಯು ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು, ಅದರಲ್ಲಿ ತೇರ್ಗಡೆಯಾಗಲು ಕನಿಷ್ಟ 50 ಅಂಕಗಳನ್ನು ಪಡೆಯಬೇಕು ಮತ್ತು ಸಂದರ್ಶನವು 5 ಅಂಕಗಳನ್ನೊಳಗೊಂಡಿರುತ್ತದೆ.

ಕರ್ನಾಟಕ ಸರ್ಕಾರ ಆದೇಶ ಸಂಖ್ಯೆ ಡಿಪಿಎಆರ್. 59 ಎಸ್.ಸಿ.ಆರ್. 2012 ದಿನಾಂಕ 07.07.2012 ರ ಪ್ರಕಾರ ದಿನಾಂಕ 22.03.2012 ರಿಂದ ಜಾರಿಗೆ ಬಂದಿರುವಂತೆ ಗಣಕಯಂತ್ರ (ಕಂಪ್ಯೂಟರ್) ಜ್ಞಾನ ಕಡ್ಡಾಯ.

3. ಬೆರಳಚ್ಚು – ನಕಲುಗಾರರು : ಖಾಲಿ ಇರುವ ಹುದ್ದೆಗಳು – 01.

ವೇತನ ಶ್ರೇಣಿ: 11600–200–12000–250–13000–300–14200–350–15600–400–17200–450–19000–500–21000.

ಹುದ್ದೆಗಳ ವರ್ಗೀಕರಣ

ಮೀಸಲಾತಿ	ಮಹಿಳೆ	ಒಟ್ಟು ಹುದ್ದೆ
ಪ್ರವರ್ಗ–2 (ಎ)	**01**	**01**

ವಿದ್ಯಾರ್ಹತೆ : ಎಸ್.ಎಸ್.ಎಲ್.ಸಿ; ಅಥವಾ ತತ್ಸಮಾನ ಪರೀಕ್ಷೆ ಮತ್ತು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯವರು ನಡೆಸುವ ಕನ್ನಡ ಮತ್ತು ಇಂಗ್ಲಿಷ್ ಎರಡೂ ಭಾಷೆಯಲ್ಲೂ ಕಿರಿಯ ಶ್ರೇಣಿ ಬೆರಳಚ್ಚು ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

ಆಯ್ಕೆಯ ವಿಧಾನ : ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು 15 ನಿಮಿಷಗಳ ಉಕ್ತಲೇಖನದಲ್ಲಿ ಕೊಡುವ ವಿಷಯವನ್ನು ಬೆರಳಚ್ಚು ಮಾಡುವ ಅರ್ಹತಾ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

ಟಿಪ್ಪಣಿ: ಅರ್ಹತಾ ಪರೀಕ್ಷೆಯು ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು, ಅದರಲ್ಲಿ ತೇರ್ಗಡೆಯಾಗಲು ಕನಿಷ್ಟ 50 ಅಂಕಗಳನ್ನು ಪಡೆಯಬೇಕು ಮತ್ತು ಸಂದರ್ಶನವು 5 ಅಂಕಗಳನ್ನೊಳಗೊಂಡಿರುತ್ತದೆ.

ಕರ್ನಾಟಕ ಸರ್ಕಾರ ಆದೇಶ ಸಂಖ್ಯೆ ಡಿಪಿಎಆರ್. 59 ಎಸ್.ಸಿ.ಆರ್. 2012 ದಿನಾಂಕ 07.07.2012 ರ ಪ್ರಕಾರ ದಿನಾಂಕ 22.03.2012 ರಿಂದ ಜಾರಿಗೆಬಂದಿರುವಂತೆ ಗಣಕಯಂತ್ರ (ಕಂಪ್ಯೂಟರ್) ಜ್ಞಾನ ಕಡ್ಡಾಯ.

4. ಒಂದು ಸ್ವೀಪರ್ ಕಂ ವಾಚ್‌ಮನ್(ಸೇವಕ) ಸೇರಿ ಸೇವಕರು: ಖಾಲಿ ಹುದ್ದೆಗಳು – 08.

ವೇತನ ಶ್ರೇಣಿ : 9600–200–12000–250–13000–300–14200–350–14550.

ಹುದ್ದೆಗಳ ವರ್ಗೀಕರಣ

ಮೀಸಲಾತಿ	ಗ್ರಾಮೀಣ ಅಭ್ಯರ್ಥಿ	ಇತರೆ	ಮಹಿಳೆ	ಕನ್ನಡ ಮಾಧ್ಯಮ	ಒಟ್ಟು
ಪರಿಶಿಷ್ಟ ಜಾತಿ	–	01	–	–	01
ಪರಿಶಿಷ್ಟ ಪಂಗಡ	01	–	–	–	01
2–ಎ	–	01	–	–	01
3–ಎ	01	–	–	–	01
ಸಾಮಾನ್ಯ	02	–	01	01	04
ಒಟ್ಟು	**04**	**02**	**01**	**01**	**08**

ಪ್ರಥಮ ರಾಷ್ಟ್ರೀಯ ನ್ಯಾಯಾಂಗ ವೇತನ ಆಯೋಗದ ಶಿಫಾರಸ್ಸಿನಂತೆ, ಸರ್ಕಾರಿ ಆದೇಶ ಸಂಖ್ಯೆ ಲಾ 128 ಎಲ್.ಎ.ಸಿ. 2005 ದಿನಾಂಕ 14.07.2008 ಮತ್ತುದಿನಾಂಕ 29.10.2010 ರನ್ವಯ ಒಂದು ಹೆಚ್ಚುವರಿ ವೇತನ ಮುಂಬಡ್ತಿಗೆ ಸೇವಕರನ್ನು ಹೊರತುಪಡಿಸಿ ಉಳಿದ ಎಲ್ಲಾ ಹುದ್ದೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳು ಅರ್ಹರಿರುತ್ತಾರೆ.

ವಿದ್ಯಾರ್ಹತೆ: 7ನೇ ತರಗತಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

ಆಯ್ಕೆಯ ವಿಧಾನ: ಕರ್ನಾಟಕ ಅಧೀನ ನ್ಯಾಯಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳು) (ನೇಮಕಾತಿ) (ತಿದ್ದುಪಡಿ) ನಿಯಮಗಳು 2007 ರನ್ವಯ ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಆಧಾರಗಳ ಮೇಲೆ ಒಂದು ಹುದ್ದೆಗೆ 10 ಅಭ್ಯರ್ಥಿಗಳಂತೆ ಅತಿ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಪ್ರಕಟಿಸಿರುವ ಹುದ್ದೆಗಳಿಗೆ ಅನುಗುಣವಾಗಿ ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನದಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

ಟಿಪ್ಪಣಿ: ಸಂದರ್ಶನವು 10 ಅಂಕಗಳನ್ನು ಒಳಗೊಂಡಿರುತ್ತದೆ.

ಮಹಿಳಾ ಅಭ್ಯರ್ಥಿಗಳು, ಕನ್ನಡ ಮಾಧ್ಯಮ ಹಾಗೂ ಗ್ರಾಮೀಣ ಅಭ್ಯರ್ಥಿಗಳ ಮೀಸಲಾತಿಗಳಲ್ಲಿ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷದಲ್ಲಿ, ಆ ಹುದ್ದೆಗಳನ್ನು ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು. ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳೂ ಸಹ ಲಭ್ಯವಾಗದಿದ್ದಲ್ಲಿ, ಸದರಿ ಹುದ್ದೆಗಳನ್ನು ಸಾಮಾನ್ಯ ಇತರೆ ವರ್ಗದ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

ಅರ್ಹತಾ ಪರೀಕ್ಷೆಗೆ ಹಾಗೂ ಸಂದರ್ಶನಕ್ಕೆ ಆಯ್ಕೆಯಾಗುವ ಅಭ್ಯರ್ಥಿಗಳು ಕೋಲಾರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.

ವಯೋಮಿತಿಃ

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು

ಅ. ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.

ಆ. ಗರಿಷ್ಠ ವಯೋಮಿತಿ

ಸಾಮಾನ್ಯ ವರ್ಗ	**35 ವರ್ಷ**
2ಎ, 2ಬಿ, 3ಬಿ, 3ಎ	**38 ವರ್ಷ**
ಪ.ಜಾತಿ, ಪ. ಪಂಗಡ, ಪ್ರವರ್ಗ – 1	**40 ವರ್ಷ**

ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಗರಿಷ್ಠ ವಯಸ್ಸನ್ನು ಮೀರಿರಕೂಡದು.

ವಯೋಮಿತಿ ಸಡಲಿಕೆ ಃಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಟ ವಯೋಮಿತಿಯನ್ನು ಆಯಾ ಅಭ್ಯರ್ಥಿಗಳಿಗೆ ನಮೂದಿಸಿರುವ ಮಟ್ಟಿಗೆ ಹೆಚ್ಚಿಸಲಾಗುವುದು.

1. ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವರು ಎಷ್ಟು ವರ್ಷಗಳ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ, ಎರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು.
2. ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ, ಅವನು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಆ ವರ್ಷಗಳಿಗೆ 3 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.
3. ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ ಮತ್ತು ಜೀತ ಕಾರ್ಮಿಕನಾಗಿದ್ದಲ್ಲಿ 10 ವರ್ಷಗಳು.

ಪರಿವೀಕ್ಷಣಾ ಅವಧಿ ಃ

ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977ರ ಪ್ರಕಾರ 2 ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಅವರುಗಳ ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಮತ್ತು ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು.

ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ವಿಧಾನ ಃ

ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪ್ರಮಾಣಪತ್ರವನ್ನು ಪಡೆದು, ಅರ್ಜಿಗಳನ್ನು ಸಂಬಂಧಿತ ನೇಮಕಾತಿ ಪ್ರಾಧಿಕಾರದ ಮೂಲಕ ಕಳುಹಿಸಬೇಕು.

ಅರ್ಜಿ ಸಲ್ಲಿಸುವ ವಿಧಾನ ಃ

ಈ ಪ್ರಕಟಣೆಯಲ್ಲಿ ಲಗತ್ತಿಸಿರುವ ಅರ್ಜಿ ನಮೂನೆಯನ್ನು ಬೆರಳಚ್ಚು ಮಾಡಿ/ಕಂಪ್ಯೂಟರ್ ಮೂಲಕ ತಯಾರಿಸಿ, ಅರ್ಜಿಯನ್ನು ತಮ್ಮ ಸ್ವಂತ ಕೈಬರಹದಲ್ಲಿ ತಮಗೆ ಅನ್ವಯಿಸುವ ಎಲ್ಲಾ ಅಂಕಣಗಳನ್ನು ಭರ್ತಿ ಮಾಡುವುದು. ಅಭ್ಯರ್ಥಿಯು ತನ್ನ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಅರ್ಜಿಯ ಮೇಲೆ ಅಂಟಿಸಿ, ಅದರ ಮೇಲೂ ಸಹ ಸಹಿ ಮಾಡುವುದು ಹಾಗೂ ಅರ್ಜಿ ನಮೂನೆಯ ಕೊನೆಯಲ್ಲಿ ಘೋಷಣೆಯ ನಂತರ ಸಹಿ ಮಾಡುವುದು. ಹುದ್ದೆಗೆ ಸಂಬಂಧಿಸಿದಂತೆ ವಿದ್ಯಾರ್ಹತೆ, ವಯಸ್ಸು ಮತ್ತು ಕೋರಿರುವ ಮೀಸಲಾತಿಗೆ ಸಂಬಂಧಿಸಿದಂತೆ ಪ್ರಮಾಣ ಪತ್ರಗಳನ್ನು ಅಧಿಕೃತ ಅಧಿಕಾರಿಗಳಿಂದ ಪಡೆದು, ಅವುಗಳ ನಕಲುಗಳನ್ನು ಸ್ವಯಂ ದೃಢೀಕರಿಸಿ ಅರ್ಜಿಯೊಂದಿಗೆ ಲಗತ್ತಿಸಿ ಅರ್ಜಿಯನ್ನು 'ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಕೋಲಾರ – 563101', ಇವರಿಗೆ ದಿನಾಂಕ ಃ 25–11–2013 ಅಪರಾಹ್ನ 5–00 ಗಂಟೆಯೊಳಗೆ ತಲುಪುವಂತೆ ಕಳುಹಿಸುವುದು. ಅರ್ಜಿಯನ್ನು ಕಳುಹಿಸುವ ಲಕೋಟೆ ಮೇಲೆ ಅಭ್ಯರ್ಥಿಯು ಯಾವ ಹುದ್ದೆಗೆ ಅರ್ಜಿಯನ್ನು ಸಲ್ಲಿಸುತ್ತಾನೆ ಎಂಬುದರ ಬಗ್ಗೆ ಹುದ್ದೆಯ ಹೆಸರನ್ನು ನಮೂದಿಸುವುದು.

ಅಭ್ಯರ್ಥಿಗಳು ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲಾತಿಗಳುಃ

ಅಭ್ಯರ್ಥಿಗಳು ಈ ಕೆಳಕಂಡ ದಾಖಲಾತಿಗಳ ಸ್ವಯಂ ದೃಢೀಕರಿಸಿದ ಒಂದು ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸಬೇಕು.

1. ಇತ್ತಿಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ.
2. ಜನ್ಮ ದಿನಾಂಕದ ಧೃಡೀಕರಣಕ್ಕಾಗಿ ಎಸ್‌ಎಸ್‌ಎಲ್‌ಸಿ ಅಂಕ ಪಟ್ಟಿ/ಕ್ಯುಮುಲೇಟೀವ್ ರೆಕಾರ್ಡ್/ಇನ್ನಾವುದೇ ಅಧಿಕೃತ ದಾಖಲಾತಿಗಳು.
3. ವಿದ್ಯಾರ್ಹತೆಯ ಬಗ್ಗೆ ಅಂಕಪಟ್ಟಿಗಳು.
4. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಮೂನೆ' ಡಿ'ಯಲ್ಲಿ ಪ್ರವರ್ಗ–1 ರ ಅಭ್ಯರ್ಥಿಗಳು ನಮೂನೆ –ಇ ಯಲ್ಲಿ ಮತ್ತು 2 ಎ , 2 ಬಿ , 3 ಎ ಮತ್ತು 3 ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ 'ಎಫ್'ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಪಡೆದು ಸಲ್ಲಿಸಬೇಕು.
5. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ನಿಗದಿತ ನಮೂನೆ – 2 ರಲ್ಲಿ ಅಧಿಕೃತ ಅಧಿಕಾರಿಗಳಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿ ಸಲ್ಲಿಸಬೇಕು.
6. ಗ್ರಾಮೀಣ ಮೀಸಲಾತಿಯನ್ನು ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ಪ್ರಮಾಣ ಪತ್ರ ನಮೂನೆ – 2 ರ ಜೊತೆ ನಮೂನೆ – 1 ರಲ್ಲೂ ಧೃಢಿಕರಣ ಪತ್ರವನ್ನು ಸಲ್ಲಿಸುವುದು.
7. ವಿಧವೆಯರು, ಜೀತ ಕಾರ್ಮಿಕರು ವಯೋಮಿತಿ ರಿಯಾಯ್ತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣಪತ್ರವನ್ನು ಸಲ್ಲಿಸುವುದು.

8. ಅರ್ಜಿಯನ್ನು ಕಳುಹಿಸಲು ನಿಗದಿಪಡಿಸಿದ ದಿನಾಂಕದಂದು 6 ತಿಂಗಳ ಒಳಗೆ ಇಬ್ಬರು ಗೌರವಾನ್ವಿತ ವ್ಯಕ್ತಿಗಳು ನೀಡಿರುವ ನಡತೆ ಪ್ರಮಾಣಪತ್ರವನ್ನು ಸಲ್ಲಿಸುವುದು.

9. ಸ್ವಯಂ ವಿಳಾಸವಿರುವ ರೂ 5/– ಅಂಚೆ ಚೀಟಿ ಅಂಟಿಸಿರುವ ಲಕೋಟೆಯನ್ನು ಅರ್ಜಿಯೊಂದಿಗೆ ಲಗತ್ತಿಸುವುದು.

ವಿಶೇಷ ಸೂಚನೆಃ

ಅರ್ಜಿಯೊಂದಿಗೆ ಲಗತ್ತಿಸುವ ಎಲ್ಲಾ ಪ್ರಮಾಣಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು ಇಲ್ಲವೇ ಕೊನೆಯ ದಿನಾಂಕದಂದು ಸಿಂಧುವಾಗಿರಬೇಕು ಮತ್ತು ಕಡ್ಡಾಯವಾಗಿ ಸ್ವಯಂ ಧೃಡೀಕರಿಸಿರಬೇಕು.

ಯಾವುದೇ ಅಭ್ಯರ್ಥಿಯು ಸರ್ಕಾರಿ/ಸರ್ಕಾರೇತರ ಅಧಿಕಾರಿಗಳಿಂದ ತನ್ನ ಅಭ್ಯರ್ಥಿತ್ವದ ಬಗ್ಗೆ ಪ್ರಭಾವ ಬೀರಿದರೆ ಅಂತಹ ಅಭ್ಯರ್ಥಿಗಳು ನೇಮಕಾತಿಗೆ ಅರ್ಹರಾಗಿರುವುದಿಲ್ಲ.

ಯಾವುದೇ ಅಭ್ಯರ್ಥಿಯು ಸಂದರ್ಶನದ ಬಗ್ಗೆ ಮಾಹಿತಿ ಬರದಿದ್ದರೆ, ಅವರು ಸಂದರ್ಶನಕ್ಕೆ ಅರ್ಹರಲ್ಲ ಎಂದು ತಿಳಿಯುವುದು ಮತ್ತು ಈ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಮಾಡಲಾಗುವುದಿಲ್ಲ.

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವಜನಿಕ ರಜೆಯಾಗಿದ್ದರೆ ಮುಂದಿನ ಕಛೇರಿ ಕೆಲಸದ ದಿನ ಅರ್ಜಿ ಸಲ್ಲಿಸಲು ಕಡೆಯ ದಿನಾಂಕ ಎಂದು ತಿಳಿಯುವುದು.

ಎಸ್.ರೇಣುಕಾ ಪ್ರಸಾದ

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಕೋಲಾರ.

ಅರ್ಜಿ ನಮೂನೆ

ರವರಿಗೆ,

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಕೋಲಾರ.

ಅಭ್ಯರ್ಥಿಯ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರದ ಮೇಲೆ ಸಹಿ ಮಾಡಿ ಅಂಟಿಸುವುದು

ತಮ್ಮ ಕಛೇರಿಯ ಅಧಿಸೂಚನೆ ಸಂಖ್ಯೆ ಎಡಿಎಂ/02/2013, ದಿನಾಂಕಃ 07–10–2013 ರ ಮೇರೆಗೆ ನಾನು _____________________ ಹುದ್ದೆಗೆ ಅರ್ಜಿಯನ್ನು ಸಲ್ಲಿಸುತ್ತಿದ್ದೇನೆ ಮತ್ತು ಈ ಕೆಳಕಂಡ ಮಾಹಿತಿಯನ್ನು ಒದಗಿಸುತ್ತಿದ್ದೇನೆ.

1	ಅಭ್ಯರ್ಥಿಯ ಹೆಸರು (ದಪ್ಪ ಅಕ್ಷರಗಳಲ್ಲಿ)			
2	ತಂದೆ/ಗಂಡನ ಹೆಸರು			
3	ತಾಯಿಯ ಹೆಸರು			
4	ಜನ್ಮ ದಿನಾಂಕ			
5	ವಯಸ್ಸು (ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆ ದಿನಾಂಕದಂದು ಅಭ್ಯರ್ಥಿ ವಯಸ್ಸು)	ವರ್ಷ	ತಿಂಗಳು	ದಿನ
6	ಲಿಂಗ	ಪುರುಷ		ಮಹಿಳೆ
7	ರಾಷ್ಟ್ರೀಯತೆ			
8	ಧರ್ಮ ಮತ್ತು ಜಾತಿ			
9	ವೈವಾಹಿಕ ಸ್ಥಿತಿ	ವಿವಾಹಿತ		ಅವಿವಾಹಿತ
10	ಕೋರುವ ಮೀಸಲಾತಿಗಳು(ಸಾಮಾನ್ಯ, 2ಎ, 3ಎ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ) ಮೀಸಲಾತಿಯನ್ನು ಸ್ಪಷ್ಟವಾಗಿ ನಮೂದಿಸತಕ್ಕದ್ದು ಮತ್ತು ಪ್ರಮಾಣ ಪತ್ರದ ಸ್ವಯಂ ಧೃಡೀಕೃತ ನಕಲನ್ನು ಲಗತ್ತಿಸಬೇಕು)			
11	ನೀವು ಈ ಯಾವುದಾದರು ಮೀಸಲಾತಿ ಅಡಿಯಲ್ಲಿ ಬರುತ್ತೀರಾ? (ಗ್ರಾಮೀಣ, ಕನ್ನಡ ಮಾಧ್ಯಮ ಅಭ್ಯರ್ಥಿ) ಮೀಸಲಾತಿಯನ್ನು ಸ್ಪಷ್ಟವಾಗಿ ನಮೂದಿಸತಕ್ಕದ್ದು ಮತ್ತು ಪ್ರಮಾಣ ಪತ್ರದ ಸ್ವಯಂ ಧೃಡೀಕೃತ ನಕಲನ್ನು ಲಗತ್ತಿಸಬೇಕು)			
12	**ವಿದ್ಯಾರ್ಹತೆ ಃ** (ಸ್ವಯಂ ದೃಢಿಕೃತ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು) ಅನ್ವಯಿಸುವ ವಿದ್ಯಾರ್ಹತೆ ಅಂಕಣ ಗಳನ್ನು ಮಾತ್ರ ಭರ್ತಿ ಮಾಡುವುದು	ತೇರ್ಗಡೆಯಾದ ತಿಂಗಳು ಮತ್ತು ವರ್ಷ	ಗರಿಷ್ಠ ಅಂಕಗಳು	ಗಳಿಸಿದ ಅಂಕಗಳು
	7ನೇ ತರಗತಿ			
	ಎಸ್.ಎಸ್.ಎಲ್.ಸಿ;			

	ಕನ್ನಡ ಬೆರಳಚ್ಚು (ಕಿರಿಯ ಶ್ರೇಣಿ)			
	ಆಂಗ್ಲ ಬೆರಳಚ್ಚು (ಕಿರಿಯ ಶ್ರೇಣಿ)			
	ಕನ್ನಡ ಬೆರಳಚ್ಚು (ಹಿರಿಯ ಶ್ರೇಣಿ)			
	ಆಂಗ್ಲ ಬೆರಳಚ್ಚು (ಹಿರಿಯ ಶ್ರೇಣಿ)			
	ಕನ್ನಡ ಶೀಘ್ರಲಿಪಿ (ಹಿರಿಯ ಶ್ರೇಣಿ)			
	ಆಂಗ್ಲ ಶೀಘ್ರಲಿಪಿ (ಹಿರಿಯ ಶ್ರೇಣಿ)			
	ಕಂಪ್ಯೂಟರ್ ಜ್ಞಾನದ ಪ್ರಮಾಣಪತ್ರ (ಸೇವಕರ ಹುದ್ದೆಗೆ ಹೊರತುಪಡಿಸಿ ಇತರೆ ಹುದ್ದೆಗಳಿಗೆ)			
13	ನೀವು ಪ್ರಸ್ತುತ ಸರ್ಕಾರಿ ಸೇವೆಯಲ್ಲಿರುವಿರಾ? (ಸರ್ಕಾರಿ ಸೇವೆಯಲ್ಲಿದ್ದಲ್ಲಿ ನೇಮಕಾತಿ ಪ್ರಾಧಿಕಾರದಿಂದ ಪಡೆದ ನಿರಾಕ್ಷೇಪಣಾ ಪತ್ರದ ನಕಲನ್ನು ಲಗತ್ತಿಸಬೇಕು)	ಹೌದು		ಇಲ್ಲ
14	ಅಭ್ಯರ್ಥಿಯ ಅಂಚೆ ವಿಳಾಸ ಮತ್ತು ದೂರವಾಣಿ ಸಂಖ್ಯೆ			
15	ನಿಮ್ಮ ಸ್ವವಿಳಾಸವಿರುವ ರೂ.5/- ರ ಅಂಚೆ ಚೀಟಿ ಅಂಟಿಸಿರುವ ಲಕೋಟೆಯನ್ನು ಲಗತ್ತಿಸಿದ್ದೀರ?			

ಈ ಮೇಲ್ಕಂಡ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ ಹಾಗೂ ಒಂದು ವೇಳೆ ಮೇಲ್ಕಂಡ ಮಾಹಿತಿಗಳು ತಪ್ಪು ಎಂದು ಕಂಡು ಬಂದಲ್ಲಿ ನನ್ನ ಅಭ್ಯರ್ಥಿತ್ವವನ್ನು ರದ್ದುಪಡಿಸಬಹುದೆಂದು ಘೋಷಿಸುತ್ತೇನೆ.

ಸ್ಥಳ :

ದಿನಾಂಕ: **ಅಭ್ಯರ್ಥಿಯ ಸಹಿ.**

PR.114

SC.5

ನೇಮಕಾತಿ ಪ್ರಕಟಣೆ

ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ, ಹಾಸನ

ಅಧಿಸೂಚನೆ ಸಂಖ್ಯೆ 4/2013, ದಿನಾಂಕ 10.10.2013

ವಿಷಯ: ಆದೇಶ ಜಾರಿಕಾರರು ಮತ್ತು ಸೇವಕರ ಹುದ್ದೆಗಳಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಬಗ್ಗೆ.

ಉಲ್ಲೇಖ: ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ಪತ್ರದ ಸಂಖ್ಯೆ ಎಲ್‌ಸಿಎ-II. 128/2012 ದಿನಾಂಕ 24.09.2013

ಮೇಲ್ಕಂಡ ಅಧಿಸೂಚನೆಯನ್ವಯ ಹಾಸನ ಜಿಲ್ಲಾ ನ್ಯಾಯಾಲಯ ಘಟಕದ ಅಧೀನ ನ್ಯಾಯಾಲಯಗಳಲ್ಲಿ ಖಾಲಿ ಇರುವ ಆದೇಶ ಜಾರಿಕಾರ ಮತ್ತು ಸೇವಕರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಈ ಅಧಿಸೂಚನೆಯ ಜೊತೆ ಲಗತ್ತಿಸಿರುವ ಅರ್ಜಿ ನಮೂನೆಯಲ್ಲಿ ದಿನಾಂಕ 09.10.2013 ರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಸಲ್ಲಿಸಲು ಕಡೆಯ ದಿನಾಂಕ 18.11.2013 ಸಂಜೆ 5.00 ಗಂಟೆ

1) ಆದೇಶ ಜಾರಿಕಾರರು:

ಖಾಲಿ ಹುದ್ದೆಗಳು – 2

ವೇತನ ಶ್ರೇಣಿ – 11000–200–12000–250–13000–300–14200–350–15600–400–17200–450–19000 ಹಾಗೂ ಲಭ್ಯವಿರುವ ಇತರೆ ಭತ್ಯೆಗಳು.

ಮೀಸಲಾತಿ	ಮಹಿಳಾ ಅಭ್ಯರ್ಥಿ	ಯೋಜನಾ ನಿರಾಶ್ರಿತರು	ಒಟ್ಟು
ಸಾ.ಅ	–	1	1
II – ಬಿ	1	–	1
ಒಟ್ಟು	**1**	**1**	**2**

ವಿದ್ಯಾರ್ಹತೆ : ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ನಾಲ್ಕು ಚಕ್ರಗಳ ವಾಹನ ಚಾಲನಾ ಪರವಾನಗಿ ಇರುವ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

2) ಸೇವಕರು:

ಖಾಲಿ ಹುದ್ದೆಗಳು – 5

ವೇತನ ಶ್ರೇಣಿ – 9600–200–12000–250–13000–300–14200–350–14550 ಹಾಗೂ ಲಭ್ಯವಿರುವ ಇತರೆ ಭತ್ಯೆಗಳು.

ಮೀಸಲಾತಿ	ಇತರೆ	ಮಹಿಳೆ	ಗ್ರಾಮೀಣ	ಅಂ.ಅ (ದೃಷ್ಟಿಮಾಂದ್ಯ)	ಒಟ್ಟು
II – ಎ			1		1
III – ಬಿ				1	1
ಸಾಮಾನ್ಯ	1	1	1		3
ಒಟ್ಟು	**1**	**1**	**2**	**1**	**5**

ವಿದ್ಯಾರ್ಹತೆ : ಕನ್ನಡ ಮಾಧ್ಯಮದಲ್ಲಿ 7ನೇ ತರಗತಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಅರ್ಜಿಯ ಜೊತೆಯಲ್ಲಿ 7ನೇ ತರಗತಿ ವ್ಯಾಸಂಗ ಮಾಡಿದ ಶಾಲೆಗೆ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೇಲು ಸಹಿ ಇರುವ ಅಂಕಪಟ್ಟಿಯ ಜೆರಾಕ್ಸ್ ಪ್ರತಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು (7ನೇ ತರಗತಿ ಪರೀಕ್ಷೆಯನ್ನು ಪಬ್ಲಿಕ್ ಪರೀಕ್ಷೆಯ ಮುಖಾಂತರ ಉತ್ತೀರ್ಣರಾದಲ್ಲಿ ಇದು ಅನ್ವಯಿಸುವುದಿಲ್ಲ.) ಮತ್ತು 7ನೇ ತರಗತಿ ಅಂಕಪಟ್ಟಿಯಲ್ಲಿ ಗ್ರೇಡ್‌ಗಳಲ್ಲಿ ನೀಡಿದ ಅಂಕಪಟ್ಟಿಯನ್ನು ಪರಿಗಣಿಸಲಾಗುವುದಿಲ್ಲ. (ಗ್ರೇಡ್‌ಗಳನ್ನು ಅಂಕಗಳನ್ನಾಗಿ ಪರಿವರ್ತಿಸಿದ ಅಂಕಪಟ್ಟಿಗಳನ್ನು ಮಾತ್ರ ಮಾನ್ಯ ಮಾಡಲಾಗುವುದು.)

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಲ್ಲಿ, ಮಹಿಳಾ ಅಭ್ಯರ್ಥಿಗಳು, ಮಾಜಿ ಸೈನಿಕ ಅಭ್ಯರ್ಥಿಗಳು, ಅಂಗವಿಕಲ ಅಭ್ಯರ್ಥಿಗಳು, ಯೋಜನಾ ನಿರಾಶ್ರಿತ ಅಭ್ಯರ್ಥಿಗಳು, ಗ್ರಾಮೀಣ ಅಭ್ಯರ್ಥಿಗಳು ಹಾಗೂ ಕನ್ನಡ ಮಾಧ್ಯಮ ಅಭ್ಯರ್ಥಿಗಳ ಮೀಸಲಾತಿಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷದಲ್ಲಿ, ಆ ಹುದ್ದೆಗಳನ್ನು ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು. ಆಯಾ ಪಂಗಡಗಳ ಇತರೆ ಅಭ್ಯಥಿಗಳೂ ಸಹ ಲಭ್ಯವಾಗದಿದ್ದಲ್ಲಿ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಮೀಸಲಾದ ಹುದ್ದೆಗಳನ್ನು ಹೊರತುಪಡಿಸಿ ಇನ್ನುಳಿದ ಹಿಂದುಳಿದ ವರ್ಗಗಳ ಹುದ್ದೆಗಳನ್ನು ಸಾಮಾನ್ಯ ವರ್ಗದ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

ಆಯ್ಕೆ ವಿಧಾನ : ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರ ಹುದ್ದೆಗಳ) ನೇಮಕಾತಿ (ತಿದ್ದುಪಡಿ) ನಿಯಮಗಳು 2007 ರ ಪ್ರಕಾರ ನೇಮಕಾತಿಯನ್ನು ಮಾಡಲಾಗುವುದು.

ಸಂದರ್ಶನಕ್ಕೆ ಆಯ್ಕೆಯಾಗುವ ಅಭ್ಯರ್ಥಿಗಳು ಹಾಸನದ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರ ಕಛೇರಿಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.

ವಯೋಮಿತಿ :

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು

ಅ) ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.

ಆ) ಗರಿಷ್ಠ ವಯೋಮಿತಿ

ಸಾಮಾನ್ಯ ವರ್ಗ	**35 ವರ್ಷ**
ಪ್ರವರ್ಗ – 2ಎ, 2ಬಿ, 3ಎ, 3ಬಿ	**38 ವರ್ಷ**
ಪ.ಜಾತಿ, ಪ.ಪಂಗಡ, ಪ್ರವರ್ಗ–1	**40 ವರ್ಷ**

ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಗರಿಷ್ಠ ವಯಸ್ಸನ್ನು ಮೀರಿರಕೂಡದು.

ವಯೋಮಿತಿ ಸಡಿಲಿಕೆ :

ಸರ್ಕಾರಿ ಸೇವೆಯಲ್ಲಿರುವವರಿಗೆ, ವಿಧವೆಯವರಿಗೆ, ಮಾಜಿ ಸೈನಿಕರಿಗೆ ಹಾಗೂ ಅಂಗವಿಕಲರಿಗೆ ನಿಯಮಾನುಸಾರ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವುದು.

ಪರಿವೀಕ್ಷಣಾ ಅವಧಿ :

ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977ರ ಪ್ರಕಾರ 02 ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ.

ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ವಿಧಾನ :

ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪ್ರಮಾಣಪತ್ರವನ್ನು ಪಡೆದು, ಅರ್ಜಿಗಳನ್ನು ಸಂಬಂಧಿತ ನೇಮಕಾತಿ ಪ್ರಾಧಿಕಾರದ ಮೂಲಕ ಕಳುಹಿಸಬೇಕು.

ಅರ್ಜಿ ಸಲ್ಲಿಸುವ ವಿಧಾನ :

ಈ ಪ್ರಕಟಣೆಯಲ್ಲಿ ಲಗತ್ತಿಸಿರುವ ನಿಗದಿತ ಅರ್ಜಿ ನಮೂನೆಯ ಬೆರಳಚ್ಚು ಪ್ರತಿ / ಗಣಕೀಕೃತ ಅರ್ಜಿ ನಮೂನೆಯ ಬೆರಳಚ್ಚು ಪ್ರತಿ / ಗಣಕೀಕೃತ ಪ್ರತಿಯನ್ನು ತಯಾರಿಸಿ, ಎಲ್ಲಾ ಅಂಕಣಗಳನ್ನು ತಮ್ಮ ಸ್ವಂತ ಕೈಬರಹದಲ್ಲಿ ಭರ್ತಿ ಮಾಡುವುದು. ಸರಿಯಾಗಿ ಅಂಕಣಗಳನ್ನು ಭರ್ತಿ ಮಾಡದೇ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಅಭ್ಯರ್ಥಿಯು ತನ್ನ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಅರ್ಜಿಯ ಮೇಲೆ ಅಂಟಿಸುವುದು ಹಾಗೂ ಅರ್ಜಿ ನಮೂನೆಯ ಕೊನೆಯಲ್ಲಿ ಘೋಷಣೆಯ ನಂತರ ಸಹಿ ಮಾಡುವುದು. ಹುದ್ದೆಗೆ ಸಂಬಂಧಿಸಿದ ವಿದ್ಯಾರ್ಹತೆ, ವಯಸ್ಸು ಮತ್ತು ಕೋರಿರುವ ಮೀಸಲಾತಿಗೆ ಸಂಬಂಧಿಸಿದಂತೆ ಪ್ರಮಾಣ ಪತ್ರಗಳನ್ನು ಅಧಿಕೃತ ಅಧಿಕಾರಿಗಳಿಂದ ಪಡೆದು, ಅವುಗಳ ನಕಲುಗಳನ್ನು ಸ್ವಯಂ ದೃಢೀಕರಿಸಿ ಅರ್ಜಿಯೊಂದಿಗೆ ಲಗತ್ತಿಸಿ ಅರ್ಜಿಯನ್ನು ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ, ಪೋಸ್ಟ್‌ಬಾಕ್ಸ್ ನಂ.15, ಹಾಸನ–573201 ಇವರಿಗೆ ದಿನಾಂಕ 18.11.2013 ರ ಸಂಜೆ 5–00 ಗಂಟೆಯೊಳಗೆ ತಲುಪುವಂತೆ ಕಳುಹಿಸುವುದು. ಅರ್ಜಿಯನ್ನು ಕಳುಹಿಸುವ ಲಕೋಟೆ ಮೇಲೆ ಅಭ್ಯರ್ಥಿಯು ಯಾವ ಹುದ್ದೆಗೆ ಅರ್ಜಿಯನ್ನು ಸಲ್ಲಿಸುತ್ತಾನೆ ಎಂಬುದರ ಬಗ್ಗೆ ಹುದ್ದೆಯ ಹೆಸರನ್ನು ನಮೂದಿಸುವುದು.

ಅಭ್ಯರ್ಥಿಗಳು ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲಾತಿಗಳು :

ಅಭ್ಯರ್ಥಿಗಳು ಈ ಕೆಳಕಂಡ ದಾಖಲಾತಿಗಳ ಸ್ವಯಂ ದೃಢೀಕರಿಸಿದ ಒಂದು ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸಬೇಕು.

1. ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಅರ್ಜಿಗೆ ಅಂಟಿಸಬೇಕು
2. ಜನ್ಮ ದಿನಾಂಕದ ದೃಢೀಕರಣಕ್ಕಾಗಿ ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ / ಇನ್ನಾವುದೇ ಅಧಿಕೃತ ಸರ್ಕಾರಿ ದಾಖಲಾತಿಗಳು.
3. ವಿದ್ಯಾರ್ಹತೆಯ ಬಗ್ಗೆ ಅಂಕಪಟ್ಟಿಗಳು.
4. ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಮೂನೆ 'ಡಿ'ಯಲ್ಲಿ, ಪ್ರವರ್ಗ–1ರ ಅಭ್ಯರ್ಥಿಗಳು ನಮೂನೆ 'ಇ'ಯಲ್ಲಿ ಮತ್ತು 2ಎ, 2ಬಿ, 3ಎ ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ 'ಎಫ್'ನಲ್ಲಿ ಸಂಬಂಧಿಸಿದ ತಹಸೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣಪತ್ರಗಳನ್ನು ಪಡೆದು ಸಲ್ಲಿಸಬೇಕು.
5. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರ ಆದೇಶ ಸಂಖ್ಯೆ:ಸಿಆಸುಇ/53/ಸೇನನಿ/2007, ದಿನಾಂಕ 04.01.2008ರ ಪ್ರಕಾರ ನಿಗದಿತ ನಮೂನೆ – 2ರಲ್ಲಿ ಅಧಿಕೃತ ಅಧಿಕಾರಿಗಳಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿ ಸಲ್ಲಿಸಬೇಕು. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.
6. ಗ್ರಾಮೀಣ ಮೀಸಲಾತಿಯನ್ನು ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ಪ್ರಮಾಣಪತ್ರ ನಮೂನೆ – 2ರ ಜೊತೆ ನಮೂನೆ – 1ರಲ್ಲೂ ದೃಢೀಕರಣ ಪತ್ರವನ್ನು ಸಲ್ಲಿಸುವುದು.
7. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿ:19.11.2005ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ: ಸಿಆಸುಇ/115/ಸೇನನಿ/2005 ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣಪತ್ರವನ್ನು ಪಡೆದು ಸಲ್ಲಿಸಬೇಕು.
8. ಯೋಜನಾ ನಿರಾಶ್ರಿತ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ/44/ಸೇನನಿ/2001ರ ದಿನಾಂಕ 27–07–2001ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸತಕ್ಕದ್ದು.
9. ವಿಧವೆಯರು, ಜೀತ ಕಾರ್ಮಿಕರು ಮತ್ತು ವಯೋಮಿತಿ ರಿಯಾಯಿತಿಗೆ ಅರ್ಹರಾದ ಇನ್ನಿತರರು ವಯೋಮಿತ ರಿಯಾಯಿತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರವನ್ನು ಸಲ್ಲಿಸುವುದು.
10. ವಾಹನ ಚಾಲನೆಯ ಪರವಾನಗಿ (ಆದೇಶ ಜಾರಿಕಾರರ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಮಾತ್ರ)
11. ಸ್ವಯಂ ವಿಳಾಸವಿರುವ 5/– ರೂ.ಗಳ ಅಂಚೆ ಚೀಟಿ ಅಂಟಿಸಿರುವ ಲಕೋಟೆಯನ್ನು ಅರ್ಜಿಯೊಂದಿಗೆ ಲಗತ್ತಿಸುವುದು. (ಸಂದರ್ಶನ ಪತ್ರವನ್ನು ನೊಂದಣಿ ಅಂಚೆ ಮೂಲಕ ಪಡೆಯಲು ಇಚ್ಛಿಸುವ ಅಭ್ಯರ್ಥಿಗಳು 25 ರೂ.ಗಳ ಅಂಚೆ ಚೀಟಿ ಅಂಟಿಸಿರುವ ಲಕೋಟೆಯನ್ನು ಅರ್ಜಿಯೊಂದಿಗೆ ಲಗತ್ತಿಸುವುದು) ಅಂಚೆ ಕಛೇರಿಯಿಂದ ಆಗುವ Lapses ಗಳಿಗೆ ಈ ಕಛೇರಿಯು ಹೊಣೆಯಾಗುವುದಿಲ್ಲ.

ಇತರೆ ಸೂಚನೆಗಳು :

1. ಅರ್ಜಿಯೊಂದಿಗೆ ಲಗತ್ತಿಸುವ ಎಲ್ಲಾ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು. ಇಲ್ಲವೇ ಕೊನೆಯ ದಿನಾಂಕದಂದು ಸಿಂಧುವಾಗಿರಬೇಕು ಮತ್ತು ಕಡ್ಡಾಯವಾಗಿ ಸ್ವಯಂ ದೃಢೀಕರಿಸಿರಬೇಕು.
2. ಯಾವುದೇ ಅಭ್ಯರ್ಥಿಯು ಸರ್ಕಾರಿ/ಸರ್ಕಾರೇತರ ಅಧಿಕಾರಿಗಳಿಂದ ತನ್ನ ಅಭ್ಯರ್ಥಿತ್ವದ ಬಗ್ಗೆ ಪ್ರಭಾವ ಬೀರಿದರೆ ಅಂತಹ ಅಭ್ಯರ್ಥಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.
3. ಯಾವುದೇ ಅಭ್ಯರ್ಥಿಯು ಸಂದರ್ಶನದ ಬಗ್ಗೆ ಮಾಹಿತಿ ಬರದಿದ್ದರೆ, ಅವರು ಸಂದರ್ಶನಕ್ಕೆ ಅರ್ಹರಲ್ಲ ಎಂದು ತಿಳಿಯುವುದು ಮತ್ತು ಈ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಮಾಡಲಾಗುವುದಿಲ್ಲ.
4. ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ದಿನಾಂಕವು ಸಾರ್ವಜನಿಕ ರಜೆಯಾಗಿದ್ದರೆ ಮುಂದಿನ ಕಛೇರಿ ಕೆಲಸದ ದಿನ ಅರ್ಜಿ ಸಲ್ಲಿಸಲು ಕಡೆಯ ದಿನಾಂಕ ಎಂದು ತಿಳಿಯುವುದು.
5. ಅಭ್ಯರ್ಥಿಗಳ ಆಯ್ಕೆಯ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರುತ್ತದೆ.
6. ಮೇಲ್ಕಂಡ ಹುದ್ದೆಗಳ ಸಂಖ್ಯೆ ಬದಲಾವಣೆಗೊಳ್ಳುವ ಸಂಭವವಿದೆ.
7. ಕೊನೆಯ ದಿನಾಂಕದ ನಂತರ ಸಲ್ಲಿಸಲಾದ ಯಾವುದೇ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಜೆ.ಎಸ್. ಸೋಮಶೇಖರ

ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ಹಾಸನ

ಅರ್ಜಿ ನಮೂನೆ

.. **ಹುದ್ದೆಗೆ ಅರ್ಜಿ**

ಪಾಸ್ ಪೋರ್ಟ್ ಅಳತೆಯ ಭಾವಚಿತ್ರವನ್ನು ಅಂಟಿಸಬೇಕು

ಗೆ ::

ಮಾನ್ಯ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ಹಾಸನ

ಮಾನ್ಯರೆ,

ತಮ್ಮ ನ್ಯಾಯಾಲಯದ ಅಧಿಸೂಚನೆ ಸಂಖ್ಯೆ 4/2013, ದಿನಾಂಕ 10.10.2013ರ ಪ್ರಕಟಣೆ ಮೇರೆಗೆ ನಾನು ಈ ಕೆಳಕಂಡ ಮಾಹಿತಿಗಳೊಂದಿಗೆ .. ಹುದ್ದೆಗೆ ನನ್ನ ಅರ್ಜಿಯನ್ನು ಸಲ್ಲಿಸುತ್ತಿದ್ದೇನೆ.

1.	ಅಭ್ಯರ್ಥಿಯ ಹೆಸರು				
2.	ತಂದೆ / ತಾಯಿ / ಗಂಡನ ಹೆಸರು				
3.	ಪೂರ್ಣ ವಿಳಾಸ				
4.	ಹುಟ್ಟಿದ ದಿನಾಂಕ ಮತ್ತು ವಯಸ್ಸು				
5.	ಲಿಂಗ : ಗಂಡು / ಹೆಣ್ಣು				
6.	ರಾಷ್ಟ್ರೀಯತೆ ಧರ್ಮ ಜಾತಿ / ಉಪಜಾತಿ				
7.	ಪ್ರ.ಜಾ, ಪ.ಪಂ, ಪ್ರವರ್ಗ–1 ಪ್ರವರ್ಗ–2ಎ, 2ಬಿ, ಪ್ರವರ್ಗ–3ಎ, 3ಬಿ ಗುಂಪಿಗೆ ಸೇರಿದವರೇ ?				
8.	ಯಾವ ವರ್ಗ / ಮೀಸಲಾತಿ ಅಡಿಯಲ್ಲಿ ಅರ್ಜಿ ಸಲ್ಲಿಸುತ್ತಿದ್ದೀರಿ ? (ಸಂಬಂಧಪಟ್ಟ ದಾಖಲಾತಿಗಳನ್ನು ಲಗತ್ತಿಸತಕ್ಕದ್ದು)				
9.	ತಂದೆ : ತಾಯಿ : ಗಂಡನ ಉದ್ಯೋಗ				
10.	ಎ) ವಿವಾಹಿತರೆ/ ಅವಿವಾಹಿತರೇ ?				
	ಬಿ) ವಿವಾಹಿತರಾಗಿದಲ್ಲಿ ಒಬ್ಬರಿಗಿಂತ ಹೆಚ್ಚು ಜೀವಂತ ಗಂಡ ಅಥವಾ ಹೆಂಡತಿ ಇದ್ದಾರೆಯೇ ?				
11.	ಶೈಕ್ಷಣಿಕ ವಿದ್ಯಾರ್ಹತೆ (ಸ್ವಯಂ ದೃಢೀಕೃತ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು)	**ಉತ್ತೀರ್ಣ ಹೊಂದಿದ ವರ್ಷ ಮತ್ತು ನೊಂದಣಿ ಸಂಖ್ಯೆ**	**ಗರಿಷ್ಟ ಅಂಕಗಳು**	**ಪಡೆದಿರುವ ಅಂಕಗಳು**	**ಶೇಕಡಾವಾರು ಅಂಕಗಳು**
ಎ	7ನೇ ತರಗತಿ ವಿದ್ಯಾರ್ಹತೆ				
ಬಿ	ಎಸ್ಎಸ್ಎಲ್‌ಸಿ / ತತ್ಸಮಾನ ವಿದ್ಯಾರ್ಹತೆ				
	ಬಿ) 11ನೇ ಕಾಲಂನಲ್ಲಿ ತೋರಿಸಿರುವುದಕ್ಕಿಂತ ಹೆಚ್ಚಿನ ವಿದ್ಯಾರ್ಹತೆ ಹೊಂದಿದ್ದರೆ ಆ ಬಗ್ಗೆ ವಿವರಣೆ				
12.	ನೀವು ಪ್ರಸ್ತುತ ಸರ್ಕಾರಿ ಸೇವೆಯಲ್ಲಿರುವಿರಾ ? (ಸರ್ಕಾರಿ ಸೇವೆಯಲ್ಲಿದ್ದಲ್ಲಿ ನೇಮಕಾತಿ ಪ್ರಾಧಿಕಾರದಿಂದ ಪಡೆದ ನಿರಾಕ್ಷೇಪಣಾ ಪತ್ರದ ನಕಲನ್ನು ಲಗತ್ತಿಸಬೇಕು)				
13.	ತಂದೆ : ತಾಯಿ: ಬಂಧುಗಳು: ಪತ್ನಿ: ಪತಿ : ಸಹೋದರ :ಸಹೋದರಿಯರು ಮತ್ತು ಇತರ ಹತ್ತಿರ ಸಂಬಂಧಿಗಳು ಸರ್ಕಾರಿ ನೌಕರರೇ? (ಸಂಬಂಧಪಟ್ಟ ದಾಖಲೆ ಹಾಜರುಪಡಿಸುವುದು).				
14.	ಯಾವುದಾದರು ಅಪರಾಧದಲ್ಲಿ ಭಾಗಿಯಾಗಿರುವಿರೇ?				
15.	ಲಗತ್ತುಪಡಿಸಿದ ದಾಖಲೆಗಳು	**1.** **2.** **3.** **4.**			

ಸೂಚನೆ:– ಅಭ್ಯರ್ಥಿಗಳು ಎಲ್ಲಾ ಕಾಲಂಗಳನ್ನು ಕಡ್ಡಾಯವಾಗಿ ಭರ್ತಿ ಮಾಡತಕ್ಕದ್ದು.

ಈ ಮೇಲ್ಕಂಡ ಮಾಹಿತಿಗಳು ನನಗೆ ತಿಳಿದ ಮಟ್ಟಿಗೆ ಸತ್ಯ ಮತ್ತು ಸರಿಯಾಗಿವೆಯೆಂದು ಪ್ರಮಾಣೀಕರಿಸುತ್ತೇನೆ ಮತ್ತು ಒಂದು ವೇಳೆ ಮೇಲ್ಕಂಡ ಮಾಹಿತಿಗಳು ತಪ್ಪು ಎಂದು ಕಂಡುಬಂದಲ್ಲಿ ನನ್ನ ಅಭ್ಯರ್ಥಿತನವನ್ನು ರದ್ದುಪಡಿಸಬಹುದು ಎಂದು ಈ ಮೂಲಕ ಘೋಷಿಸುತ್ತೇನೆ.

ದಿನಾಂಕ ::

ಸ್ಥಳ: **ಅಭ್ಯರ್ಥಿಯ ಸಹಿ.**

PR.113

ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಬಾಗಲಕೋಟ.

ಅಧಿಸೂಚನೆ ಸಂಖ್ಯೆ : 02/2013 ದಿನಾಂಕ: 22–10–2013

ವಿಷಯ : ಶೀಘ್ರಲಿಪಿಗಾರರ ಹುದ್ದೆಗಳಿಗೆ ನೇರ ನೇಮಕಾತಿ.

ಉಲ್ಲೇಖ :
1. ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ : ಎಲ್.ಸಿ.ಎ–2.128/2012 ದಿನಾಂಕ: 26–07–2013 ಮತ್ತು 20–09–2013.
2. ಈ ನ್ಯಾಯಾಲಯದ ಕಚೇರಿ ಟಿಪ್ಪಣಿ ದಿನಾಂಕ: 22–10–2013 ಮತ್ತು ಅಧಿಸೂಚನೆ ಸಂಖ್ಯೆ 02/2012 ದಿನಾಂಕ: 20–10–2012 ಮತ್ತು ಅಧಿಸೂಚನೆ ಸಂಖ್ಯೆ 01/2013 ದಿನಾಂಕ: 08–05–2013.

ಬಾಗಲಕೋಟ ಜಿಲ್ಲೆಯ ನ್ಯಾಯಾಲಯಗಳಲ್ಲಿ ಖಾಲಿ ಇರುವ **"ಶೀಘ್ರಲಿಪಿಗಾರರ"** ಹುದ್ದೆಗಳಿಗಾಗಿ ನಿಗಧಿತ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಿದ್ದು, ಇಚ್ಛೆಯುಳ್ಳ ಅಭ್ಯರ್ಥಿಗಳು ಅರ್ಜಿ ನಮೂನೆಯಲ್ಲಿನ ಎಲ್ಲ ಅಂಕಣಗಳನ್ನು ಭರ್ತಿ ಮಾಡಿ ಅರ್ಜಿಯ ಜೊತೆಗೆ ದಾಖಲಾತಿಗಳ ದೃಢೀಕೃತ ನಕಲುಗಳನ್ನು ಲಗತ್ತಿಸಿ, ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬಾಗಲಕೋಟ, ಇವರಿಗೆ ನಿಗದಿತ ಅವಧಿಯೊಳಗಾಗಿ ಅರ್ಜಿಯನ್ನು ಸಲ್ಲಿಸತಕ್ಕದ್ದು.

ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕ: 18–11–2013 ಸಾಯಂಕಾಲ 05–00 ಗಂಟೆ

1) **ನೇರ ನೇಮಕಾತಿಗಾಗಿ ನಿಗದಿಪಡಿಸಿದ ಶೀಘ್ರಲಿಪಿಗಾರರ ಹುದ್ದೆಗಳ ಸಂಖ್ಯೆ ಹಾಗೂ ವರ್ಗೀಕರಣ:–**

ಕ್ರ. ಸಂ.	ಹುದ್ದೆ ಮತ್ತು ವೇತನ ಶ್ರೇಣಿ	ಒಟ್ಟು ಹುದ್ದೆಗಳು		ವರ್ಗೀಕರಣ					
				ಇತರೆ	ಗ್ರಾಮೀಣ	ಮಹಿಳೆ	ಅಂಗವಿಕಲ	ಮಾಜಿ ಸೈನಿಕ	ಯೋಜನಾ ನಿರಾಶ್ರಿತ
1	ಶೀಘ್ರಲಿಪಿಗಾರರು 14550 – 26700 (ಇತರೆ ಭತ್ಯೆಗಳು)	11	ಸಾಮಾನ್ಯ ಅಭ್ಯರ್ಥಿ	–	2	–	–	–	1
			ಪರಿಶಿಷ್ಟ ಜಾತಿ	–	2	–	1	–	–
			ಪರಿಶಿಷ್ಟ ಪಂಗಡ	1	–	–	–	–	–
			ಪ್ರವರ್ಗ–1	–	–	1	–	–	–
			ಪ್ರವರ್ಗ–2ಎ	–	1	–	1	–	–
			ಪ್ರವರ್ಗ–2ಬಿ	–	–	1	–	–	–
			ಒಟ್ಟು	**1**	**5**	**2**	**2**	**–**	**1**

2) **ಕನಿಷ್ಠ ಶೈಕ್ಷಣಿಕ ವಿದ್ಯಾರ್ಹತೆ :–**

ಕ್ರಮ ಸಂಖ್ಯೆ	ಹುದ್ದೆ	ಕನಿಷ್ಠ ಶೈಕ್ಷಣಿಕ ವಿದ್ಯಾರ್ಹತೆ
01	**ಶೀಘ್ರಲಿಪಿಗಾರ**	1. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಎಸ್ಎಸ್ಎಲ್‌ಸಿ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ. ಮತ್ತು 2. ಕರ್ನಾಟಕ ಸಾರ್ವಜನಿಕ ಶಿಕ್ಷಣ ಇಲಾಖೆ ಅಥವಾ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಕನ್ನಡ ಹಾಗೂ ಆಂಗ್ಲ ಬೆರಳಚ್ಚು ಪ್ರೌಢ ದರ್ಜೆ ಹಾಗೂ ಕನ್ನಡ ಹಾಗೂ ಆಂಗ್ಲ ಶೀಘ್ರಲಿಪಿ ಪ್ರೌಢ ದರ್ಜೆ ಪರೀಕ್ಷೆಗಳಲ್ಲಿ ಅಥವಾ ತತ್ಸಮಾನ ವಿದ್ಯಾರ್ಹತೆ. ಅಥವಾ **3.** ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಸೆಕ್ರೆಟರಿಯಲ್ ಪ್ರ್ಯಾಕ್ಟಿಸ್ ಪಠ್ಯಕ್ರಮದ ಡಿಪ್ಲೋಮಾ ಪದವಿಯೊಂದಿಗೆ ಕನ್ನಡ ಮತ್ತು ಆಂಗ್ಲ ಭಾಷೆಗಳ ಬೆರಳಚ್ಚು ಹಾಗೂ ಶೀಘ್ರಲಿಪಿ ವಿಷಯಗಳನ್ನು ಐಚ್ಛಿಕ ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರಬೇಕು.

3) **ವಯೋಮಿತಿ :–**

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು ಈ ಕೆಳಕಂಡ ವಯೋಮಿತಿಯನ್ನು ಹೊಂದಿರತಕ್ಕದ್ದು.

ಕ್ರಮ ಸಂಖ್ಯೆ	ಅಭ್ಯರ್ಥಿಯ ಪ್ರವರ್ಗ	ಕನಿಷ್ಠ ವಯೋಮಿತಿ	ಗರಿಷ್ಠ ವಯೋಮಿತಿ
1	ಸಾಮಾನ್ಯ ವರ್ಗ	18 ವರ್ಷ	35 ವರ್ಷ
2	ಪ್ರವರ್ಗ 2ಎ, 2ಬಿ, 3ಎ, 3ಬಿ		38 ವರ್ಷ
3	ಪರಿಶಿಷ್ಟ ಜಾತಿ ಃ ಪರಿಶಿಷ್ಟ ಪಂಗಡ ಃ ಪ್ರವರ್ಗ–1		40 ವರ್ಷ

ಸರಕಾರಿ ಸೇವೆಯಲ್ಲಿರುವವರಿಗೆ, ವಿಧವೆಯರಿಗೆ, ಮಾಜಿ ಸೈನಿಕರಿಗೆ ಮತ್ತು ಅಂಗವಿಕಲರಿಗೆ ನಿಯಮಗಳ ಅನುಸಾರ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವದು.

4) ಆಯ್ಕೆ ವಿಧಾನ ಃ–

1. ಅಭ್ಯರ್ಥಿಗಳ ಆಯ್ಕೆಯನ್ನು ಕರ್ನಾಟಕ ಅಧೀನ ನ್ಯಾಯಾಲಯಗಳು (ಲಿಪಿಕ ಮತ್ತು ಇತರೆ ಹುದ್ದೆಗಳು) (ನೇಮಕಾತಿ) ನಿಯಮಗಳು 1982 ಮತ್ತು ತಿದ್ದುಪಡಿ ನಿಯಮಗಳು 2007 ರಂತೆ ಮಾಡಲಾಗುವದು.

2) ಶೀಘ್ರಲಿಪಿಗಾರ ಹುದ್ದೆಗೆ ಒಂದು ನಿಮಿಷಕ್ಕೆ 120 ಶಬ್ದಗಳಂತೆ 5 ನಿಮಿಷಗಳ ಉಕ್ತ ಲೇಖನವನ್ನು ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ನೀಡಲಾಗುವದು. ಅದನ್ನು ಲಿಪ್ಯಂತರಗೊಳಿಸಿ, ಬೆರಳಚ್ಚು ಮಾಡಲು 45 ನಿಮಿಷಗಳ ಕಾಲಾವಕಾಶ ನೀಡಲಾಗುವದು. ಇದಕ್ಕೆ 100 ಗರಿಷ್ಟ ಅಂಕಗಳನ್ನು ನಿಗದಿಪಡಿಸಿದ್ದು, ಸಂದರ್ಶನಕ್ಕೆ ಅರ್ಹತೆ ಹೊಂದಲು ಕನಿಷ್ಟ 50 ಅಂಕಗಳನ್ನು ಪಡೆಯಬೇಕಾಗುವದು. ಅಭ್ಯರ್ಥಿಯು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಕನ್ನಡ ಮತ್ತು ಆಂಗ್ಲ ಬೆರಳಚ್ಚು ಮತ್ತು ಶೀಘ್ರಲಿಪಿ ಪರೀಕ್ಷೆಗಳಲ್ಲಿ ಮತ್ತು ಈ ಪ್ರಾಧಿಕಾರ ನಡೆಸಲಾದ ಶೀಘ್ರಲಿಪಿ ಮತ್ತು ಬೆರಳಚ್ಚು ಪರೀಕ್ಷೆಗಳಲ್ಲಿ ಪಡೆದ ಅಂಕಗಳ ಸರಾಸರಿ ಆಧಾರದ ಮೇಲೆ ಒಂದು ಹುದ್ದೆಗೆ 5 ರಂತೆ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವದು. ಸಂದರ್ಶನಕ್ಕೆ ಒಟ್ಟು 5 ಗುಣಗಳನ್ನು ನಿಗದಿಪಡಿಸಲಾಗಿದೆ. ಅಭ್ಯರ್ಥಿಯು ಹುದ್ದೆಗೆ ನಿಗದಿಪಡಿಸಲಾದ ಕನಿಷ್ಟ ವಿದ್ಯಾರ್ಹತೆಯಲ್ಲಿ ಪಡೆದ ಅಂಕಗಳು, ಈ ಪ್ರಾಧಿಕಾರವು ನಡೆಸಲಾದ ಕನ್ನಡ ಮತ್ತು ಆಂಗ್ಲ ಶೀಘ್ರಲಿಪಿ ಮತ್ತು ಬೆರಳಚ್ಚು ಪರೀಕ್ಷೆಯಲ್ಲಿ ಪಡೆದ ಅಂಕಗಳು ಮತ್ತು ಸಂದರ್ಶನದಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆಮಾಡಲಾಗುವದು.

3) ಆಯ್ಕೆಯಾದ ಅಭ್ಯರ್ಥಿಗಳು ನೇಮಕಾತಿ ನಿಯಮಗಳಂತೆ ಎರಡು ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯನ್ನು ಪೂರೈಸಬೇಕಾಗುವದು ಮತ್ತು ನಿರ್ಧಿಷ್ಟ ಪಡಿಸಿದ ಇಲಾಖಾ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕಾಗುವದು.

5) ಸೂಚನೆಗಳು ಃ–

01) ಅಭ್ಯರ್ಥಿಗಳು ತಾವು ಯಾವ ಹುದ್ದೆಗೆ ಅರ್ಜಿಯನ್ನು ಸಲ್ಲಿಸಿದ್ದಾರೆ ಎನ್ನುವುದನ್ನು ಲಕೋಟೆಯ ಮೇಲೆ ಹಾಗೂ ಅರ್ಜಿಯ ಮೇಲೆ ಕಡ್ಡಾಯವಾಗಿ ನಮೂದಿಸತಕ್ಕದ್ದು.

02) ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆಯುವುದರ ಮೂಲಕ ಅರ್ಜಿಯನ್ನು ಸಮುಚಿತ ಮಾರ್ಗದ ಮುಖಾಂತರ ಸಲ್ಲಿಸತಕ್ಕದ್ದು. ಸರ್ಕಾರಿ ಸೇವೆಯಲ್ಲಿದ್ದುಕೊಂಡು ನಿರಾಕ್ಷೇಪಣಾ ಪ್ರಮಾಣ ಪತ್ರ ಪಡೆಯದೇ ಅರ್ಜಿ ಸಲ್ಲಿಸಿದ್ದು ಬೆಳಕಿಗೆ ಬಂದಲ್ಲಿ ಅಂತಹ ಅಭ್ಯರ್ಥಿಯ ನೇಮಕಾತಿಯನ್ನು ರದ್ದುಪಡಿಸಲಾಗುವುದು.

03) ಅಭ್ಯರ್ಥಿಗಳು ನಿರ್ಧಿಷ್ಟಪಡಿಸಿದ ಅರ್ಜಿ ನಮೂನೆಯಲ್ಲಿ ತಮ್ಮ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಅಂಟಿಸಿ ಅದರ ಜೊತೆಗೆ ಸ್ವ–ವಿಳಾಸವಿರುವ ಮತ್ತು 5 ರೂಪಾಯಿಗಳ ಅಂಚೆ ಚೀಟಿಯನ್ನು ಲಗತ್ತಿಸಿದ ಲಕೋಟೆಯೊಂದಿಗೆ ಸಲ್ಲಿಸತಕ್ಕದ್ದು.

04) ಅಭ್ರ್ಯಥಿಗಳನ್ನು ನಿಗದಿಪಡಿಸಿದ ಕನಿಷ್ಟ ವಿದ್ಯಾರ್ಹತೆಯಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಸಂದರ್ಶನಕ್ಕೆ ಕರೆಯಬೇಕಾಗಿರುವದರಿಂದ, ಅವರು ನಿಗದಿಪಡಿಸಿದ ಕನಿಷ್ಟ ವಿದ್ಯಾರ್ಹತೆಯನ್ನು ಹೊಂದಿದ ಬಗ್ಗೆ ದೃಢೀಕೃತ ಅಂಕಪಟ್ಟಿಗಳ ನಕಲುಗಳನ್ನು ಕಡ್ಡಾಯವಾಗಿ ಅರ್ಜಿಯ ಜೊತೆಗೆ ಲಗತ್ತಿಸತಕ್ಕದ್ದು. ಇಲ್ಲವಾದಲ್ಲಿ ಅಂತಹ ಅರ್ಜಿಗಳನ್ನು ಪರಿಗಣಿಸಲಾಗುವದಿಲ್ಲ.

05) ಜನ್ಮ ದಿನಾಂಕವನ್ನು ದೃಢೀಕರಿಸಲು ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ ಅಥವಾ ವರ್ಗಾವಣೆ ಪ್ರಮಾಣ ಪತ್ರದ ದೃಢೀಕೃತ ದಾಖಲೆಯನ್ನು ಕಡ್ಡಾಯವಾಗಿ ಲಗತ್ತಿಸತಕ್ಕದ್ದು.

06) ಮೀಸಲಾತಿಯನ್ನು ಕೋರಿ ಅರ್ಜಿಗಳನ್ನು ಸಲ್ಲಿಸಿದ ಅಭ್ಯರ್ಥಿಗಳು ಸರಕಾರದಿಂದ ನಿಗದಿಪಡಿಸಿದ ಸಂಬಂಧಪಟ್ಟ ಅಧಿಕಾರಿಗಳಿಂದ ಪಡೆದ ಹಾಗೂ ಚಾಲ್ತಿಯಲ್ಲಿರುವ ಪ್ರಮಾಣ ಪತ್ರಗಳ ದೃಢೀಕೃತ ದಾಖಲೆಗಳನ್ನು ಕಡ್ಡಾಯವಾಗಿ ಲಗತ್ತಿಸತಕ್ಕದ್ದು.

07) ಒಂದು ವೇಳೆ ಅಧಿಸೂಚನೆಯಲ್ಲಿ ನಮೂದಿಸಿದ ವರ್ಗೀಕರಣಕ್ಕನುಸಾರವಾಗಿ ಅರ್ಹ ಮಹಿಳೆ ಮತ್ತು ಮಾಜಿ ಸೈನಿಕ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಆ ಸ್ಥಾನಗಳಿಗೆ ಅದೇ ವರ್ಗದ ಅರ್ಹ ಇತರ ಅಭ್ಯರ್ಥಿಗಳನ್ನು ಭರ್ತಿ ಮಾಡಿಕೊಳ್ಳಲಾಗುವದು.

08) ಅರ್ಹತಾ ಪರೀಕ್ಷೆ ಮತ್ತು ಸಂದರ್ಶನಕ್ಕಾಗಿ ಆಹ್ವಾನಿಸಿದ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬೇಕು.

09) ಅಪೂರ್ಣ ಮತ್ತು ಕಡ್ಡಾಯವಾಗಿ ಲಗತ್ತಿಸಬೇಕಾದ ದಾಖಲಾತಿಗಳನ್ನು ಲಗತ್ತಿಸದ ಹಾಗೂ ಕೊನೆಯ ದಿನಾಂಕದ ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

10) ಅಂಗವಿಕಲ ಮೀಸಲಾತಿ ಕೋರುವ ಅಭ್ಯರ್ಥಿಗಳು ದಿನಾಂಕಃ 19–05–2005 ರ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ ಃಸಿಆಸುಇಃ115ಃಸೇನೆನಿಃ2005 ರಲ್ಲಿ ನಿಗಧಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದು ಛಾಯಾ ಪ್ರತಿಯನ್ನು ಸಲ್ಲಿಸತಕ್ಕದ್ದು.

11) ಗ್ರಾಮೀಣ ಮೀಸಲಾತಿ ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆಃಸಿಆಸುಇಃ98ಃಸೇನೆನಿಃ2005, ದಿನಾಂಕಃ 10–08–2005 ರ ಪ್ರಕಾರ ನಿಗಧಿತ ನಮೂನೆ – 2 ರಲ್ಲಿ ಅಧೀಕೃತ ಅಧಿಕಾರಿಗಳಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿ ಛಾಯಾ ಪ್ರತಿಯನ್ನು ಸಲ್ಲಿಸತಕ್ಕದ್ದು.

12) ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ – 2 ರ ಮೀಸಲಾತಿ ಪ್ರಮಾಣ ಪತ್ರದ ಜೊತೆ ನಮೂನೆ – 1 ರಲ್ಲಿ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ತಹಶೀಲ್ದಾರವರಿಂದ ಪಡೆದ ಪ್ರಮಾಣ ಪತ್ರದ ಛಾಯಾ ಪ್ರತಿಯನ್ನು ಸಲ್ಲಿಸತಕ್ಕದ್ದು.

13. ಪರಿಶಿಷ್ಟ ಜಾತಿ ಃ ಪರಿಶಿಷ್ಟ ಪಂಗಡ, ಪ್ರವರ್ಗ–2ಎ, 2ಬಿ, 3ಎ, 3ಬಿ ಹಾಗೂ ಪ್ರವರ್ಗ – 1 ಕ್ಕೆ ಸೇರಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳ ಛಾಯಾ ಪ್ರತಿಯನ್ನು ಸಲ್ಲಿಸತಕ್ಕದ್ದು.
14. ಅರ್ಜಿಯನ್ನು ಕಳುಹಿಸಲು ನಿಗದಿಪಡಿಸಿದ ದಿನಾಂಕದಿಂದ 6 ತಿಂಗಳ ಒಳಗಿರುವ ಇಬ್ಬರು ಗಣ್ಯ ವ್ಯಕ್ತಿಗಳು ನೀಡಿರುವ ನಡತೆ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು.
15. ಅರ್ಜಿಯನ್ನು ಕಳುಹಿಸಲು ನಿಗದಿಪಡಿಸಿದ ದಿನಾಂಕದಿಂದ 6 ತಿಂಗಳ ಒಳಗಿರುವ ಅಭ್ಯರ್ಥಿಯು ಅಭ್ಯಸಿಸಿದ ಶಾಲೆ ಃ ವಿದ್ಯಾಲಯದಿಂದ ಪಡೆದ ಒಂದು ನಡತೆ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು.

6) **ವಿಶೇಷ ಸೂಚನೆಗಳು ಃ–**

01) ಅರ್ಜಿಯೊಂದಿಗೆ ಲಗತ್ತಿಸಿರುವ ಎಲ್ಲಾ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದಂದು ಸಿಂಧುವಾಗಿರಬೇಕು.
02) ಯಾವುದೇ ಅಭ್ಯರ್ಥಿಯು ಸರ್ಕಾರಿ ಃ ಸರ್ಕಾರೇತರ ಅಧಿಕಾರಿಗಳಿಂದ ತನ್ನ ಅಭ್ಯರ್ಥಿಕೆಯ ಬಗ್ಗೆ ಪ್ರಭಾವ ಬೀರಿದಲ್ಲಿ, ಅಂತಹ ಅಭ್ಯರ್ಥಿಗಳು ನೇಮಕಾತಿಗೆ ಅನರ್ಹರಾಗುವುದಿಲ್ಲ.
03) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ದಿನಾಂಕವು ಸಾರ್ವಜನಿಕ ರಜೆ ಎಂದು ಘೋಷಿಸಿದ ಪಕ್ಷದಲ್ಲಿ ಮುಂದಿನ ಕಚೇರಿ ಕೆಲಸದ ದಿನ ಅರ್ಜಿ ಸಲ್ಲಿಸಲು ಕಡೆಯ ದಿನಾಂಕ ಎಂದು ತಿಳಿಯತಕ್ಕದ್ದು.
04) ಯಾವುದೇ ಅಭ್ಯರ್ಥಿಯು ಸಂದರ್ಶನದ ಬಗ್ಗೆ ಮಾಹಿತಿ ಬರದಿದ್ದರೆ, ಅವರು ಸಂದರ್ಶನಕ್ಕೆ ಅರ್ಹರಲ್ಲ ಎಂದು ತಿಳಿಯುವುದು ಮತ್ತು ಆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಮಾಡಲಾಗುವುದಿಲ್ಲ.

ಸ್ಥಳ ಃ ಬಾಗಲಕೋಟ

ದಿನಾಂಕ ಃ 22–10–2013

ಬಾಲಕೃಷ್ಣ ಬಿ.

ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬಾಗಲಕೋಟ.

ಅರ್ಜಿ ನಮೂನೆ

ಬಾಗಲಕೋಟ ಜಿಲ್ಲೆಯ ನ್ಯಾಯಾಲಯದಲ್ಲಿ ಖಾಲಿ ಇರುವ ಶೀಘ್ರಲಿಪಿಗಾರರ ಹುದ್ದೆಗಾಗಿ ಅರ್ಜಿ

(ಅರ್ಜಿ ಸ್ವೀಕರಿಸಲು ಕೊನೆಯ ದಿನಾಂಕ ಃ 18–11–2013)

EwÃa£ ¨Áª avÀª£À ®Uw¸Àª zÀ

ಗೆ,

ಮಾನ್ಯ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬಾಗಲಕೋಟ.

ಮಾನ್ಯರೇ,

ತಮ್ಮ ನ್ಯಾಯಾಲಯದ ಅಧಿಸೂಚನೆ ಸಂಖ್ಯೆ ಃ 02 / 2013 ದಿನಾಂಕ ಃ 22–10–2013 ರ ಪ್ರಕಟಣೆ ಮೇರೆಗೆ ನಾನು ಈ ಕೆಳಕಂಡ ಮಾಹಿತಿಗಳೊಂದಿಗೆ "____________________" ಹುದ್ದೆಗೆ ಹಾಗೂ "________________________" ವೇತನ ಶ್ರೇಣಿ / ಮೀಸಲಾತಿ ಅಡಿಯಲ್ಲಿ ನನ್ನ ಅರ್ಜಿಯನ್ನು ಸಲ್ಲಿಸುತ್ತಿದ್ದೇನೆ.

1)	ಅಭ್ಯರ್ಥಿಯ ಪೂರ್ಣ ಹೆಸರು (ದಪ್ಪ ಅಕ್ಷರಗಳಲ್ಲಿ)			
2)	ತಂದೆ ಃ ಗಂಡನ ಹೆಸರು			
3)	ತಾಯಿಯ ಹೆಸರು			
4)	ಸಂಪೂರ್ಣ ಅಂಚೆ ವಿಳಾಸ			
5)	ದೂರವಾಣಿ ಃ ಮೊಬೈಲ್ ಸಂಖ್ಯೆ			
6)	ಜನ್ಮ ದಿನಾಂಕ ಃ (ಸೂಕ್ತ ಪ್ರಮಾಣ ಪತ್ರದ ದೃಢೀಕೃತ ನಕಲನ್ನು ಲಗತ್ತಿಸುವದು)			
7)	ವಯಸ್ಸು (ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದಂದು ಅಭ್ಯರ್ಥಿಯ ವಯಸ್ಸು)	ವರ್ಷಗಳು	ತಿಂಗಳು	ದಿನಗಳು
8)	ಲಿಂಗ	ಪುರುಷ	ಮಹಿಳೆ	
9)	ರಾಷ್ಟ್ರೀಯತೆ			
10)	ಧರ್ಮ ಮತ್ತು ಜಾತಿ			
11)	ವೈವಾಹಿಕ ಸ್ಥಿತಿ	ವಿವಾಹಿತ	ಅವಿವಾಹಿತ	

12)	ವಿವಾಹಿತರಾಗಿದ್ದಲ್ಲಿ ಒಂದಕ್ಕಿಂತ ಹೆಚ್ಚು ಜೀವಂತ ಗಂಡಃ ಹೆಂಡತಿ ಇದ್ದಾರೆಯೇ?				
13)	ನೀವು ಯಾವುದಾದರೂ ಕ್ರಿಮಿನಲ್ ಮೊಕದ್ದಮೆಯಲ್ಲಿ ಭಾಗಿಯಾಗಿದ್ದೀರಾ?				
14)	ನೀವು ಸರಕಾರಿ ಸೇವೆಯಿಂದ ಅಥವಾ ಇನ್ನಾವುದಾದರೂ ಸೇವೆಯಿಂದ ವಜಾ ಆಗಿದ್ದೀರಾ? ಅಥವಾ ತೆಗೆದುಹಾಕಲ್ಪಟ್ಟಿದ್ದೀರಾ?				
15)	ನೀವು ಸರಕಾರಿ ಸೇವೆಯಲ್ಲಿ ಇದ್ದಲ್ಲಿ ಅದರ ವಿವರ (ಸೇವಾ ಪ್ರಮಾಣ ಪತ್ರದೊಂದಿಗೆ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಲಗತ್ತಿಸುವದು)				
16)	ಶೈಕ್ಷಣಿಕ ವಿದ್ಯಾರ್ಹತೆ		ಗರಿಷ್ಟ ಅಂಕಗಳು	ಪಡೆದ ಅಂಕಗಳು	ಶೇಕಡಾವಾರು
	1)	ಎಸ್‌ಎಸ್‌ಎಲ್‌ಸಿ			
	2)	ಹಿರಿಯ ಕನ್ನಡ ಶೀಘ್ರಲಿಪಿ			
	3)	ಹಿರಿಯ ಆಂಗ್ಲ ಶೀಘ್ರಲಿಪಿ			
	4)	ಹಿರಿಯ ಕನ್ನಡ ಬೆರಳಚ್ಚು			
	5)	ಹಿರಿಯ ಆಂಗ್ಲ ಬೆರಳಚ್ಚು			
	(ಸೂಕ್ತ ಪ್ರಮಾಣ ಪತ್ರಗಳ ಸ್ವಯಂ ದೃಢೀಕೃತ ನಕಲುಗಳನ್ನು ಲಗತ್ತಿಸುವದು)				
17)	ಹೆಚ್ಚಿನ ವಿದ್ಯಾರ್ಹತೆಗಳು (ಪ್ರಮಾಣ ಪತ್ರವನ್ನು ಲಗತ್ತಿಸುವದು)				
18)	ಯಾವ ಮಿಸಲಾತಿ ಅಡಿಯಲ್ಲಿ ಅರ್ಜಿಯನ್ನು ಸಲ್ಲಿಸಿರುತ್ತೀರಿ?				
19)	ಹೆಚ್ಚಿನ ಸೇವಾ ಅನುಭವ ಇದ್ದಲ್ಲಿ ಅದರ ವಿವರ (ಪ್ರಮಾಣ ಪತ್ರ ಲಗತ್ತಿಸುವದು)				
20)	ಲಗತ್ತಿಸಿದ ದಾಖಲೆಗಳು		1. 2. 3. 4. 5. 6. 7. 8. 9. 10.		

ಈ ಮೇಲ್ಕಂಡ ಮಾಹಿತಿಗಳು ನನಗೆ ತಿಳಿದ ಮಟ್ಟಿಗೆ ಸತ್ಯ ಮತ್ತು ಸರಿಯಾಗಿವೆಯೆಂದು ಪ್ರಮಾಣೀಕರಿಸುತ್ತೇನೆ. ಒಂದು ವೇಳೆ ಮೇಲ್ಕಂಡ ಮಾಹಿತಿಗಳು ತಪ್ಪು ಎಂದು ಕಂಡು ಬಂದಲ್ಲಿ ನನ್ನ ಅಭ್ಯರ್ಥಿತನವನ್ನು ರದ್ದುಪಡಿಸಬಹುದು ಮತ್ತು ಕಾನೂನಿನ ಅನುಸಾರ ನನ್ನ ಮೇಲೆ ಸೂಕ್ತ ಕ್ರಮವನ್ನು ಕೈಕೊಳ್ಳಬಹುದಾಗಿದೆ ಎಂದು ಈ ಮೂಲಕ ಘೋಷಿಸುತ್ತೇನೆ.

ಸ್ಥಳ ಃ

ದಿನಾಂಕ ಃ **ಅಭ್ಯರ್ಥಿಯ ಸಹಿ**

ಸೂಚನೆ ಃ ಅಭ್ಯರ್ಥಿಗಳು ಅರ್ಜಿಯ ಜೊತೆಗೆ 5 ರೂಪಾಯಿಗಳ ಅಂಚೆ ಚೀಟಿಯನ್ನು ಲಗತ್ತಿಸಿದ ಸ್ವವಿಳಾಸವಿರುವ ಲಕೋಟೆಯನ್ನು ಸಲ್ಲಿಸತಕ್ಕದ್ದು.

PR.119

ಸರ್ಕಾರಿ ಕೇಂದ್ರ ಮುದ್ರಣಾಲಯ, ಫಟಕ–2, ಬೆಂಗಳೂರು